# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತಿ ಪರಿಶಿಷ್ಟ ರೈತರಗೆ ಮಿನಿ ಟ್ರ್ಯಾಕ್ಟರ್ (upto 25 PTO HP) ಸಹಾಯಧನವನ್ನು ರೂ.2.00 ಲಕ್ಷದಿಂದ ರೂ.3.00 ಲಕ್ಷಕ್ಕೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಕೃಇ 105 ಕೃಇಕ 2013, ದಿ:24-02-2014
2. ಸರ್ಕಾರದ ಆದೇಶ ಸಂಖ್ಯೆ:ಕೃಇ 123 ಕೃಮಸ 2015, ದಿ:17-10-2015
3. ದಿನಾಂಕ:04-06-2019ರಂದು ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ಅನುಸೂಚಿತ ಜಾತಿಗಳ / ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಸಭಾ ನಡವಳಿಗಳು
4. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಉಕೃನಿ/(ಕೃಯಾಂ&ಸೂನೀ)/ ಕೃಯಾಂ/ಟ್ರ್ಯಾಕ್ಟರ್ ಸಹಾಯಧನ/2019-20, ದಿ:04-06-2019, 08-08-2019 & ದಿ:17-08-2019

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ರೈತರಿಗೆ ಸಣ್ಣ ಟ್ರಾಕ್ಟರ್‌ಗಳನ್ನು ರಿಯಾಯಿತಿ ದರದಲ್ಲಿ ವಿತರಿಸುವ ಕಾರ್ಯಕ್ರಮವನ್ನು ಅನುಷ್ಟಾನಗೊಳಿಸಲು ಕೇಂದ್ರ ಸರ್ಕಾರದಿಂದ ಹಾಗೂ ಆಗಿಂದಾಗ್ಗೆ ಅನುಮೋದಿತ ಪಟ್ಟಿಯಲ್ಲಿ ಸೇರ್ಪಡಿಸಲಾಗಿರುವ ಸಣ್ಣ ಟ್ರಾಕ್ಟರ್ ಮಾದರಿ (16-25 ಪಿ.ಟಿ.ಓ.ಹೆಚ್.ಪಿ) ಗಳಿಗೆ ಗರಿಷ್ಟ ರೂ.0.75 ಲಕ್ಷಗಳ ಸಹಾಯಧನವನ್ನು ರೈತರಿಗೆ ಒದಗಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಆದೇಶದನ್ವಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಸಣ್ಣ ಟ್ರ್ಯಾಕ್ಟರ್‌ಗಳಿಗೆ ನೀಡಲಾಗುತ್ತಿದ್ದ ರೂ.0.75 ಲಕ್ಷಗಳ ಸಹಾಯಧನವನ್ನು ರೂ.2.00 ಲಕ್ಷಗಳಿಗೆ ಹೆಚ್ಚಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (3)ರ ಸಭಾ ನಡವಳಿಯಲ್ಲಿ ರಾಜ್ಯ ಪರಿಷತ್ತು ಎಸ್.ಸಿ/ಎಸ್.ಟಿ ರೈತರಿಗೆ 25 ಹೆಚ್‌ಪಿ ಸಾಮರ್ಥ್ಯದ ಟ್ರಾಕ್ಟರ್‌ಗಳಿಗೆ ರೂ.3.00 ಲಕ್ಷ ಸಹಾಧನವನ್ನು ನೀಡಲು ಅನುಮೋದಿಸಲಾಗಿರುತ್ತದೆ.

ಮೇಲೆ ಓದಲಾದ (4) ರಲ್ಲಿನ ಪ್ರಸ್ತಾವನೆಗಳಲ್ಲಿ ಆಯುಕ್ತರು, ಕೃಷಿ ಇಲಾಖೆ ರವರು, ದಿನಾಂಕ:04-06-2019ರಂದು ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ಅನುಸೂಚಿತ ಜಾತಿಗಳ / ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಸಭಾ ನಡವಳಿಗಳಲ್ಲಿ ರಾಜ್ಯ ಪರಿಷತ್ತು ಎಸ್.ಸಿ/ಎಸ್.ಟಿ ರೈತರಿಗೆ 25 ಹೆಚ್‌ಪಿ ಸಾಮರ್ಥ್ಯದ ಟ್ರಾಕ್ಟರ್‌ಗಳಿಗೆ ರೂ.3.00 ಲಕ್ಷ

..2)

ಸಹಾಯಧನವನ್ನು ನೀಡಲು ಅನುಮೋದಿಸಲಾಗಿರುವ ಹಿನ್ನೆಲೆಯಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಸಣ್ಣ ಟ್ರ್ಯಾಕ್ಟರ್ ಖರೀದಿಸಲು ನೀಡಲಾಗುತ್ತಿರುವ ಸಹಾಯಧನವನ್ನು ರೂ.2.00 ಲಕ್ಷದಿಂದ ರೂ.3.00 ಲಕ್ಷಕ್ಕೆ ಹೆಚ್ಚಿಸಿ, ಸೂಕ್ತ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ/235/ಕೃಯೋಕಾ/2017, ಬೆಂಗಳೂರು, ದಿನಾಂಕ:27-09-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಸಣ್ಣ ಟ್ರ್ಯಾಕ್ಟರ್‌ಗಳ (upto 25 PTH HP) ಖರೀದಿಗೆ ಪ್ರಸ್ತುತ ನೀಡಲಾಗುತ್ತಿರುವ ರೂ.2.00 ಲಕ್ಷಗಳ ಸಹಾಯಧನವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರೂ.3.00 ಲಕ್ಷಗಳಿಗೆ ಹೆಚ್ಚಿಸಿ, ಈ ಮೂಲಕ ಆದೇಶಿಸಿದೆ.

ಈ ಆದೇಶವನ್ನು ದಿನಾಂಕ:04-06-2019ರಂದು ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ-2013ರ ಪ್ರಕಾರ ರಾಜ್ಯ ಅನುಸೂಚಿತ ಜಾತಿಗಳು / ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್‌ನ ಸಭೆಯ ತೀರ್ಮಾನದ ಅನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್.ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

**ಪ್ರತಿಯನ್ನು:-**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ,
4. ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ,
5. ಬೆಂಗಳೂರು-01.
6. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು
7. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌದ, ಬೆಂಗಳೂರು
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು
9. ಮಾನ್ಯ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು, ವಿಧಾನಸೌಧ, ಬೆಂಗಳೂರು
10. ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
11. ಆಯುಕ್ತರು / ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.

12. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
13. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
14. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
15. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
16. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು.
17. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
18. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ಬೆಂಗಳೂರು
19. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4) ಬೆಂಗಳೂರು
20. ರಾಜ್ಯದ ಎಲ್ಲಾ ಜಿಲ್ಲೆಗಳ ಜಂಟಿ ಕೃಷಿ ನಿರ್ದೇಶಕರುಗಳಿಗೆ (ಕೃಷಿ ನಿರ್ದೇಶಕರ ಮೂಲಕ)

<u>ಪ್ರತಿ ಮಾಹಿತಿಗಾಗಿ:</u>

1. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು
2. ಸರ್ಕಾರದ ಉಪ ಕಾರ್ಯದರ್ಶಿ-1 & 2, ಕೃಷಿ ಇಲಾಖೆ ರವರ ಆಪ್ತ ಸಹಾಯಕರು,
3. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.